**Akashvani : Bangalore**
**National Bulletin In Kannada**
**26.02.2025 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**26.02.2025 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ಮಧ್ಯಪ್ರದೇಶ ಪ್ರವಾಸದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು; ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಭಾಗಿ

೨. ದೇಶದೆಲ್ಲೆಡೆ ಶಿವರಾತ್ರಿ ಸಡಗರ; ಮಹಾಕುಂಭಮೇಳಕ್ಕೆ ಇಂದು ತೆರೆ

೩. 'ಕಿಸಾನ್ ಕ್ರೆಡಿಟ್ ಕಾರ್ಡ್' ಅಡಿ ರೈತರಿಗೆ ೧೦ ಲಕ್ಷ ಕೋಟಿ ರೂಪಾಯಿಗೂ ಅಧಿಕ ಸಾಲ

೪. ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್; ನಿರ್ಣಾಯಕ ಪಂದ್ಯದಲ್ಲಿಂದು ಇಂಗ್ಲೆಂಡ್ ಆಫ್ಘಾನಿಸ್ತಾನ ಮುಖಾಮುಖಿ

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಮಧ್ಯಪ್ರದೇಶದ ಛತ್ತರ್‌ಪುರ ಜಿಲ್ಲೆಯ ಬಾಗೇಶ್ವರ ಧಾಮದಲ್ಲಿ ನಡೆಯುವ ಸಾಮೂಹಿಕ ವಿವಾಹ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ರಾಜ್ಯಪಾಲ ಮಂಗುಭಾಯಿ ಪಟೇಲ್, ಮುಖ್ಯಮಂತ್ರಿ ಡಾ. ಮೋಹನ್ ಯಾದವ್, ಕ್ರಿಕೆಟಿಗರು, ಕಲಾವಿದರು ಮತ್ತು ಇತರ ಗಣ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿರಲಿದ್ದಾರೆ. ಛತ್ತರ್‌ಪುರ ಜಿಲ್ಲಾ ಕೇಂದ್ರದಿಂದ ಸುಮಾರು ೨೩ ಕಿ.ಮೀ ದೂರದಲ್ಲಿರುವ ಗರ್ಹಾ ಗ್ರಾಮದಲ್ಲಿ ಶ್ರೀ ಬಾಗೇಶ್ವರ ಜನ ಸೇವಾ ಸಮಿತಿಯಿಂದ ಸಾಮೂಹಿಕ ವಿವಾಹ ಸಮಾರಂಭವನ್ನು ಆಯೋಜಿಸಲಾಗಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ನವವಿವಾಹಿತರನ್ನು ಆಶೀರ್ವದಿಸಲಿದ್ದಾರೆ. ೨೫೧ ವಧುಗಳ ಪೈಕಿ ೨೨೫ ಬುಡಕಟ್ಟು, ದಲಿತ ಮತ್ತು ಒಬಿಸಿ ವರ್ಗಕ್ಕೆ ಸೇರಿದವರಾಗಿದ್ದಾರೆ. ಇವರಲ್ಲಿ ಮಧ್ಯಪ್ರದೇಶ, ಯುಪಿ, ಬಿಹಾರ, ಮಹಾರಾಷ್ಟ್ರ, ಜಾರ್ಖಂಡ್ ಸೇರಿದಂತೆ ವಿವಿಧ ರಾಜ್ಯಗಳ ವಧುಗಳು ಸೇರಿದ್ದಾರೆ. ರಾಷ್ಟ್ರಪತಿಗಳ ಭೇಟಿ ಧಾರ್ಮಿಕ ಮತ್ತು ಸಾಮಾಜಿಕ ದೃಷ್ಟಿಕೋನದಿಂದ ಮುಖ್ಯವಾದುದು ಮಾತ್ರವಲ್ಲದೆ, ಬುಂದೇಲ್‌ಖಂಡ್ ಪ್ರದೇಶದ ಅಭಿವೃದ್ಧಿಯ ಪ್ರಯತ್ನಗಳಿಗೆ ಪ್ರಚೋದನೆಯನ್ನು ನೀಡುತ್ತದೆ. ಪ್ರಧಾನಿ ನರೇಂದ್ರ ಮೋದಿ ಇತ್ತೀಚಿಗೆ ಬಾಗೇಶ್ವರ ಧಾಮದಲ್ಲಿ ಕ್ಯಾನ್ಸರ್ ಆಸ್ಪತ್ರೆಯ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ್ದರು.

**<><*<><>*><>**

ಮಹಾ ಶಿವರಾತ್ರಿ ಹಬ್ಬದ ಸುಸಂದರ್ಭದಲ್ಲಿ ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ೨೦೨೫ ರ ಮಹಾ ಕುಂಭಮೇಳ ಇಂದು ಮುಕ್ತಾಯಗೊಳ್ಳಲಿದೆ. ದೇಶಾದ್ಯಂತದ ಯಾತ್ರಿಕರು ಇಂದು ಬೆಳಗಿನಿಂದಲೇ ಸಂಗಮ್ ಮತ್ತು ಪ್ರಯಾಗ್‌ರಾಜ್‌ನ ಇತರ ಘಾಟ್‌ಗಳಲ್ಲಿ ಪವಿತ್ರ ಸ್ನಾನ ಮಾಡುತ್ತಿದ್ದಾರೆ. ಜನವರಿ ೧೩ ರಂದು ಪ್ರಾರಂಭವಾದ ಮಹಾ ಕುಂಭಮೇಳವು ಆರು ವಾರಗಳಲ್ಲಿ ಇಲ್ಲಿಯವರೆಗೆ ೬೪ ಕೋಟಿ ೬೦ ಲಕ್ಷಕ್ಕೂ ಹೆಚ್ಚು ಪ್ರವಾಸಿಗರನ್ನು ಸೆಳೆದಿದ್ದು, ಇದು ವಿಶ್ವದ ಅತಿದೊಡ್ಡ ಮಾನವೀಯ ಸಭೆಯಾಗಿದೆ. ನಿನ್ನೆ, ಸುಮಾರು ೧ ಕೋಟಿ ೨೪ ಲಕ್ಷ ಭಕ್ತರು ತ್ರಿವೇಣಿ

ಸಂಗಮದಲ್ಲಿ ಸ್ನಾನ ಮಾಡಿದರು. ಈ ಕಾರ್ಯಕ್ರಮವು ಸುರಕ್ಷಿತ ಮತ್ತು ಸ್ಮರಣೀಯವಾಗುವಂತೆ ನೋಡಿಕೊಳ್ಳಲು ಅಧಿಕಾರಿಗಳು ವಿಶೇಷ ವ್ಯವಸ್ಥೆಗಳನ್ನು ಮಾಡಿದ್ದಾರೆ. ಮಹಾಕುಂಭ ನಗರ ಮತ್ತು ವಿವಿಧ ಘಾಟ್‌ಗಳಲ್ಲಿ ಹೆಚ್ಚುತ್ತಿರುವ ಜನಸಂದಣಿಯನ್ನು ಸೂಕ್ಷ್ಮವಾಗಿ ನಿಭಾಯಿಸುತ್ತಿದ್ದು, ಭದ್ರತಾ ಸಿಬ್ಬಂದಿ ಕಟ್ಟೆಚ್ಚರ ವಹಿಸಿದ್ದಾರೆ. ರೈಲು ನಿಲ್ದಾಣಗಳು, ರಸ್ತೆಗಳು ಮತ್ತು ನಗರಕ್ಕೆ ಪ್ರವೇಶ ದ್ವಾರಗಳಲ್ಲಿ ಭಕ್ತರ ನಿರಂತರ ಒಳಹರಿವು ಕಂಡುಬಂದಿದೆ. ಅಧಿಕಾರಿಗಳು ಮೇಳ ಪ್ರದೇಶದಲ್ಲಿ "ವಾಹನ ನಿಷೇಧ ವಲಯ"ವನ್ನು ಜಾರಿಗೊಳಿಸಿದ್ದಾರೆ ಮತ್ತು ಪ್ರಯಾಗ್‌ರಾಜ್ ೨೦೨೫ ರ ಮಹಾ ಕುಂಭದ ಸುಗಮ ಅಂತ್ಯವನ್ನು ಸುಗಮಗೊಳಿಸಲು ಕಟ್ಟುನಿಟ್ಟಾದ ಜನಸಂದಣಿ ನಿಯಂತ್ರಣ ಕ್ರಮಗಳು ಮತ್ತು ಸಾಗಾಣೆ ವಲಯದಲ್ಲಿ ಸುಸಜ್ಜಿತ ಕ್ರಮಗಳನ್ನು ಕೈಗೊಳ್ಳಲಾಗಿದೆ.

**<><*<><>*><>**

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ನಿನ್ನೆ ರಾತ್ರಿ ತಮಿಳುನಾಡಿನ ಕೊಯಮತ್ತೂರಿಗೆ ಆಗಮಿಸಿದರು. ಅವರನ್ನು ಕೇಂದ್ರ ರಾಜ್ಯ ಸಚಿವ ಡಾ. ಎಲ್. ಮುರುಗನ್ ಮತ್ತು ರಾಜ್ಯದ ಇತರ ಬಿಜೆಪಿ ನಾಯಕರು ಸ್ವಾಗತಿಸಿದರು. ಅಮಿತ್ ಶಾ ಅವರು ಇಂದು ಕೊಯಮತ್ತೂರಿನಲ್ಲಿ ಬಿಜೆಪಿ ಕಚೇರಿಯನ್ನು ಉದ್ಘಾಟಿಸಲಿದ್ದಾರೆ. ಈ ರಾತ್ರಿ ಕೊಯಮತ್ತೂರು ಬಳಿಯ ಇಶಾ ಕೇಂದ್ರದಲ್ಲಿ ನಡೆಯುವ ಶಿವರಾತ್ರಿ ಆಚರಣೆಯಲ್ಲಿಯೂ ಭಾಗವಹಿಸಲಿದ್ದಾರೆ.

**<><*<><>*><>**

ಮಹಾ ಶಿವರಾತ್ರಿಯ ಸಂದರ್ಭದಲ್ಲಿ ಮಹಾಕುಂಭ ಮೇಳದ ಭಕ್ತರಿಗಾಗಿ ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಿಂದ ೩೫೦ ಕ್ಕೂ ಹೆಚ್ಚು ವಿಶೇಷ ರೈಲುಗಳ ವ್ಯವಸ್ಥೆ ಮಾಡಲಾಗಿದೆ. ಮಹಾ ಶಿವರಾತ್ರಿ ಸ್ನಾನದ ನಂತರ ಹೆಚ್ಚುವರಿ ಪ್ರಯಾಣಿಕರ ದಟ್ಟಣೆಗೆ ಅನುಗುಣವಾಗಿ ರೈಲುಗಳ ಸಂಚಾರಕ್ಕೆ ವಿಶೇಷ ವ್ಯವಸ್ಥೆ ಮಾಡಲಾಗಿದೆ ಮತ್ತು ಪ್ರಯಾಗ್‌ರಾಜ್ ಬಳಿ ಹೆಚ್ಚುವರಿ ರೇಕ್‌ಗಳನ್ನು ಹಾಕಲಾಗಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ. ಉತ್ತರ ಪ್ರದೇಶ, ಬಿಹಾರ, ಮಧ್ಯಪ್ರದೇಶ, ಜಾರ್ಖಂಡ್, ಬಂಗಾಳ ಮತ್ತು ಇತರ ರಾಜ್ಯಗಳಿಂದ ಹೆಚ್ಚಿನ ಸಂಖ್ಯೆಯ ಯಾತ್ರಿಕರು ಪ್ರಯಾಗ್‌ರಾಜ್‌ನಲ್ಲಿ ಸಂಗಮದಲ್ಲಿ ಸ್ನಾನ ಮಾಡಲು ಸೇರಿದ್ದಾರೆ. ಇಡೀ ರೈಲ್ವೆ ಕಾರ್ಯಾಚರಣೆಯನ್ನು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮತ್ತು ರೈಲ್ವೆ ಮಂಡಳಿಯ ಅಧ್ಯಕ್ಷ ಸತೀಶ್ ಕುಮಾರ್ ಅವರು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ. ವಿವಿಧ ನಿಲ್ದಾಣಗಳಲ್ಲಿ ವೈದ್ಯಕೀಯ ಸೌಲಭ್ಯಗಳು ಸಹ ಲಭ್ಯವಿದೆ ಎಂದು ಸಚಿವಾಲಯ ತಿಳಿಸಿದೆ. ಇದಲ್ಲದೇ ಮಹಾ ಶಿವರಾತ್ರಿ ಹಿನ್ನೆಲೆಯಲ್ಲಿ ವಿಶೇಷ ರೈಲಗಳ ವ್ಯವಸ್ಥೆ ಮಾಡಲಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

**ಧ್ವನಿ; ಅಶ್ವಿನಿ ವೈಷ್ಣವ್, ಕೇಂದ್ರ ಸಚಿವ**

**<><*<><>*><>**

ಅಸ್ಸಾಂ ಈಗ ಅಪರಿಮಿತ ಸಾಧ್ಯತೆಗಳ ಕೇಂದ್ರವಾಗಿದ್ದು, ಆಗ್ನೇಯ ಏಷ್ಯಾ ಮತ್ತು ಭಾರತಕ್ಕೆ ಹೆಬ್ಬಾಗಿಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಅಸ್ಸಾಂ ಪೂರ್ವ ಭಾರತದ ಉತ್ಪಾದನಾ ಕೇಂದ್ರವಾಗಲಿದೆ ಎಂದು ಅವರು ಹೇಳಿದರು. ಈ ಕಾರ್ಯತಂತ್ರದ ಸ್ಥಳದ ಪ್ರಯೋಜನಗಳನ್ನು ಪಡೆದುಕೊಳ್ಳುವಂತೆ ಕೈಗಾರಿಕೋದ್ಯಮಿಗಳನ್ನು ಒತ್ತಾಯಿಸಿದರು. ಗುವಾಹಟಿಯಲ್ಲಿ ನಿನ್ನೆ ನಡೆದ ಅಡ್ವಾಂಟೇಜ್ ಅಸ್ಸಾಂ ೨.೦ ಹೂಡಿಕೆ ಮತ್ತು ಮೂಲಸೌಕರ್ಯ ಶೃಂಗಸಭೆಯ ಉದ್ಘಾಟನಾ ಅಧಿವೇಶನವನ್ನುದ್ದೇಶಿಸಿ ಅವರು ಮಾತನಾಡಿದರು.

**ಧ್ವನಿ - ಪ್ರಧಾನಿ ನರೇಂದ್ರ ಮೋದಿ**

<><*<><>*><>

ಕಿಸಾನ್ ಕ್ರೆಡಿಟ್ ಕಾರ್ಡ್ ಅಡಿ ಒಟ್ಟು ಹತ್ತು ಲಕ್ಷ ಕೋಟಿ ರೂಪಾಯಿಗಳಿಗೂ ಹೆಚ್ಚು ಸಾಲ ನೀಡಲಾಗಿದ್ದು, ಇದರಿಂದ ಏಳು ಕೋಟಿ ೭೨ ಲಕ್ಷ ರೈತರಿಗೆ ಪ್ರಯೋಜನವಾಗಿದೆ. ಕಿಸಾನ್ ಕ್ರೆಡಿಟ್ ಕಾರ್ಡ್ ಒಂದು ಬ್ಯಾಂಕಿಂಗ್ ವ್ಯವಸ್ಥೆಯಾಗಿದ್ದು, ಇದು ರೈತರಿಗೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳಂತಹ ಕೃಷಿ ಪರಿಕರಗಳನ್ನು ಖರೀದಿಸಲು ಸಕಾಲಿಕ ಮತ್ತು ಕೈಗೆಟುಕುವ ಸಾಲವನ್ನು ಒದಗಿಸುತ್ತದೆ. ಕೆಸಿಸಿ ಮೂಲಕ ವಾರ್ಷಿಕ ಶೇಕಡಾ ೭ ರಷ್ಟು ರಿಯಾಯಿತಿ ಬಡ್ಡಿದರದಲ್ಲಿ ಮೂರು ಲಕ್ಷದವರೆಗೆ ಅಲ್ಪಾವಧಿಯ ಕೃಷಿ ಸಾಲಗಳನ್ನು ಒದಗಿಸಲು ಸರ್ಕಾರವು ಬ್ಯಾಂಕುಗಳಿಗೆ ಶೇಕಡಾ ೧.೫ ರಷ್ಟು ಬಡ್ಡಿ ಸಹಾಯಧನ ಒದಗಿಸುತ್ತದೆ ಎಂದು ಕೇಂದ್ರ ಹಣಕಾಸು ಸಚಿವಾಲಯ ತಿಳಿಸಿದೆ. ಸಾಲಗಳನ್ನು ಸಕಾಲಿಕವಾಗಿ ಮರುಪಾವತಿಸುವ ರೈತರಿಗೆ ಶೇಕಡ ೩ ರಷ್ಟು ಹೆಚ್ಚುವರಿ ತ್ವರಿತ ಮರುಪಾವತಿ ಪ್ರೋತ್ಸಾಹಧನವನ್ನು ನೀಡಲಾಗುತ್ತದೆ.

<><*<><>*><>

ಕರ್ನಾಟಕದ ಆಳಂದ್ ತಾಲೂಕಿನ ಲಾಡ್ಲೆ ಮಷಕ್ ದರ್ಗಾದಲ್ಲಿ ಮಹಾಶಿವರಾತ್ರಿ ಹಿನ್ನೆಲೆಯಲ್ಲಿ ಶಿವಲಿಂಗಕ್ಕೆ ವಿಶೇಷ ಪೂಜೆ ಸಲ್ಲಿಸಲು ರಾಜ್ಯ ಹೈಕೋರ್ಟ್ ಹಿಂದು ಭಕ್ತಾದಿಗಳಿಗೆ ಅನುಮತಿ ನೀಡಿದೆ. ಈ ದರ್ಗಾದಲ್ಲಿ ಶಿವಲಿಂಗ ಇರುವ ಹಿನ್ನೆಲೆಯಲ್ಲಿ ನ್ಯಾಯಾಲಯ ಈ ಅನುಮತಿ ನೀಡಿದೆ. ಮುಸ್ಲಿಂ ಸಮುದಾಯಕ್ಕೆ ಬೆಳಗ್ಗೆ ೮ ರಿಂದ ೧೨ ಗಂಟೆಯವರೆಗೆ ಉರಸ್ ಹಾಗೂ ಇತರ ಧಾರ್ಮಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮಧ್ಯಾಹ್ನ ೨ ರಿಂದ ೬ ಗಂಟೆಯವರೆಗೆ ದರ್ಗಾ ವ್ಯಾಪ್ತಿಯಲ್ಲಿರುವ ರಾಘವ ಚೈತನ್ಯ ಶಿವಲಿಂಗದಲ್ಲಿ ಪೂಜೆ ಸಲ್ಲಿಸಲು ನ್ಯಾಯಾಲಯ ಅನುಮತಿ ನೀಡಿದೆ. ೧೫ ಮಂದಿ ದರ್ಗಾ ಪ್ರವೇಶಿಸಿ ಪೂಜೆ ಸಲ್ಲಿಸಬಹುದು ಎಂದು ನ್ಯಾಯಪೀಠ ಹೇಳಿದೆ. ೧೪ನೇ ಶತಮಾನದ ಸೂಫಿ ಸಂತ ಮತ್ತು ೧೫ನೇ ಶತಮಾನದ ಹಿಂದು ಸಂತರ ನೇತೃತ್ವದಲ್ಲಿ ಈ ಧಾರ್ಮಿಕ ಕ್ಷೇತ್ರವನ್ನು ಅಭಿವೃದ್ಧಿಪಡಿಸಲಾಗಿದೆ.

<><*<><>*><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಇಂದು ಅರುಣಾಚಲ ಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ. ಕಮ್ಲೆ ಜಿಲ್ಲೆಯ ಕಂಪೋರಿಜೊ ವೃತ್ತದ ಬೋಸಿಮ್ಲಾದಲ್ಲಿ ನಡೆಯುವ ಮೊದಲ ಜಂಟಿ ಮೆಗಾ ನ್ಯೋಕುಮ್ ಯುಲ್ಲೊ ಸಾಂಸ್ಕೃತಿಕ ಉತ್ಸವದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಕೇಂದ್ರ ಸಂಸದೀಯ ವ್ಯವಹಾರಗಳು ಮತ್ತು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಸಹ ಭಾಗಿಯಾಗಲಿದ್ದಾರೆ. ನ್ಯೋಕುಮ್ ರಾಜ್ಯದ ನ್ಯೋಶಿ ಬುಡಕಟ್ಟು ಜನಾಂಗದವರು ಆಚರಿಸುವ ಹಬ್ಬವಾಗಿದೆ. ಮನುಕುಲದ ಶ್ರೇಯಸ್ಸು, ಉತ್ಪಾದಕತೆ, ಸಮೃದ್ಧಿ ಮತ್ತು ಸಂತೋಷಕ್ಕಾಗಿ ಈ ಹಬ್ಬವನ್ನು ಆಚರಿಸಲಾಗುತ್ತದೆ.

<><*<><>*><>

೨೦೨೫-೨೬ರ ಶೈಕ್ಷಣಿಕ ಸಾಲಿನಿಂದ ೧೦ ನೇ ತರಗತಿಗೆ ಎರಡು ಬೋರ್ಡ್ ಪರೀಕ್ಷೆಗಳನ್ನು ನಡೆಸುವ ಕರಡು ನೀತಿಯ ಕುರಿತು ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ - ಸಿಬಿಎಸ್‌ಇ ಸಲಹೆಗಳನ್ನು ಆಹ್ವಾನಿಸಿದೆ. ಕರಡು ನೀತಿಯಲ್ಲಿ, ೧೦ ನೇ ತರಗತಿಯ ಬೋರ್ಡ್ ಪರೀಕ್ಷೆಗಳನ್ನು ಎರಡು ಹಂತಗಳಲ್ಲಿ ನಡೆಸಲು ಸಿಬಿಎಸ್‌ಇ ಪ್ರಸ್ತಾಪಿಸಿದೆ, ಮೊದಲ ಹಂತವು ಫೆಬ್ರವರಿಯಿಂದ ಮಾರ್ಚ್ ವರೆಗೆ ಮತ್ತು ಎರಡನೇ ಹಂತವು ಮೇ ತಿಂಗಳಲ್ಲಿ ನಡೆಯಲಿದೆ. ಫೆಬ್ರವರಿ ೧೫ ರ ನಂತರದ ಮೊದಲ ಮಂಗಳವಾರದಿಂದ ೧೦ ನೇ ತರಗತಿ ಮತ್ತು ೧೨ ನೇ ತರಗತಿ ಪರೀಕ್ಷೆಗಳನ್ನು ಪ್ರಾರಂಭಿಸಲು ಪ್ರಸ್ತಾಪಿಸಲಾಗಿದೆ. ಮುಂದಿನ ತಿಂಗಳ ೯ ರೊಳಗೆ ತಮ್ಮ ಪ್ರತಿಕ್ರಿಯೆಯನ್ನು ಸಲ್ಲಿಸುವಂತೆ ಸಾರ್ವಜನಿಕರನ್ನು ಕೋರಲಾಗಿದೆ. ರಾಷ್ಟ್ರೀಯ

ಶಿಕ್ಷಣ ನೀತಿ - ಎನ್.ಇ.ಪಿ ೨೦೨೦ ರ ಎರಡು ಶಿಫಾರಸುಗಳನ್ನು ಅನುಸರಿಸಿ ಕರಡು ನೀತಿಯನ್ನು ಅಭಿವೃದ್ಧಿಪಡಿಸಲಾಗಿದೆ.

**<><*<><>*><>**

ಡಬ್ಲ್ಯುಟಿಟಿ ಯೂತ್ ಕಂಟೆಂಡರ್ ವಡೋದರಾ-೨೦೨೫ ಟೇಬಲ್ ಟೆನಿಸ್ ಪಂದ್ಯಾವಳಿ ಇಂದಿನಿಂದ ಆರಂಭವಾಗಲಿದ್ದು, ಶ್ರೀಲಂಕಾ, ಕೊರಿಯಾ, ಅಮೆರಿಕ, ಆಸ್ಟ್ರೇಲಿಯಾ, ಇಂಗ್ಲೆಂಡ್, ಆಂಟಿಗುವಾ, ಬಾರ್ಬುಡಾ ಸೇರಿದಂತೆ ಎಂಟು ದೇಶಗಳ ಸ್ಪರ್ಧಿಗಳೊಂದಿಗೆ ೧೬೫ ಭಾರತೀಯ ಆಟಗಾರರು ಭಾಗವಹಿಸಲಿದ್ದಾರೆ. ವಿಶ್ವದ ೭ನೇ ಶ್ರೇಯಾಂಕಿತ ಅಂಕುರ್ ಭಟ್ಟಾಚಾರ್ಜಿ, ಸಯಾಲಿ ವಾನಿ ಮತ್ತು ಉದಯೋನ್ಮುಖ ತಾರೆ ದಿವ್ಯಾಂಶಿ ಭೌಮಿಕ್ ಅವರೊಂದಿಗೆ ನಾಲ್ಕು ದಿನಗಳ ಯೂತ್ ಟೇಬಲ್ ಟೆನಿಸ್ ಪಂದ್ಯಾವಳಿಯಲ್ಲಿ ಭಾರತವನ್ನು ಮುನ್ನಡೆಸಲಿದ್ದಾರೆ. ಇಂದು ೧೭ ವರ್ಷದೊಳಗಿನ ಮತ್ತು ೧೯ ವರ್ಷದೊಳಗಿನ ಬಾಲಕರ ಮತ್ತು ಬಾಲಕಿಯರ ವಿಭಾಗಗಳಲ್ಲಿ ಪಂದ್ಯಗಳು ನಡೆಯಲಿದೆ.

**<><*<><>*><>**

ಐಸಿಸಿ ಪುರುಷರ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್‌ನಲ್ಲಿಂದು ಪಾಕಿಸ್ತಾನದ ಲಾಹೋರ್‌ನ ಗಡಾಫಿ ಕ್ರೀಡಾಂಗಣದಲ್ಲಿ ನಡೆಯಲಿರುವ 'ಬಿ' ಗುಂಪಿನ ನಿರ್ಣಾಯಕ ಪಂದ್ಯದಲ್ಲಿ ಇಂಗ್ಲೆಂಡ್ ತಂಡ ಅಫ್ಘಾನಿಸ್ತಾನವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೨:೩೦ ಕ್ಕೆ ಆರಂಭವಾಗಲಿದೆ. ಬಹುನಿರೀಕ್ಷಿತ ಈ ಪಂದ್ಯವು ಮಾಡು-ಇಲ್ಲವೆ -ಮಡಿ ಹೋರಾಟವಾಗಿದ್ದು, ಸೋತ ತಂಡವು ಪಂದ್ಯಾವಳಿಯಿಂದ ಹೊರಗುಳಿಯಲಿದೆ. ಇಂಗ್ಲೆಂಡ್ ಮತ್ತು ಅಫ್ಘಾನಿಸ್ತಾನ ಎರಡೂ ತಮ್ಮ ಆರಂಭಿಕ ಪಂದ್ಯಗಳನ್ನು ಸೋತು ಯಾವುದೇ ಅಂಕಗಳಿಲ್ಲದೆ 'ಬಿ' ಗುಂಪಿನಲ್ಲಿ ಕೊನೆಯ ಸ್ಥಾನದಲ್ಲಿವೆ. ಇಂಗ್ಲೆಂಡ್ ತಂಡವು ಆಸ್ಟ್ರೇಲಿಯಾ ವಿರುದ್ಧ ಐದು ವಿಕೆಟ್‌ಗಳ ಸೋಲು ಅನುಭವಿಸಿದರೆ, ಅಫ್ಘಾನಿಸ್ತಾನವು ದಕ್ಷಿಣ ಆಫ್ರಿಕಾ ವಿರುದ್ಧ ೧೦೭ ರನ್‌ಗಳಿಂದ ಪರಾಭವಗೊಂಡಿತ್ತು. ನಿನ್ನೆ ರಾತ್ರಿ ರಾವಲ್ಪಿಂಡಿಯಲ್ಲಿ ಆಸ್ಟ್ರೇಲಿಯಾ ಮತ್ತು ದಕ್ಷಿಣ ಆಫ್ರಿಕಾ ನಡುವಿನ ಪಂದ್ಯವು ಮಳೆಯಿಂದ ಒಂದು ಎಸೆತವೂ ಕಾಣದೇ ರದ್ದಾಗಿತ್ತು. ಎರಡೂ ತಂಡಗಳಿಗೆ ತಲಾ ಒಂದು ಅಂಕ ನೀಡಲಾಯಿತು, ಇದರಿಂದಾಗಿ ಅವರ ಒಟ್ಟು ಅಂಕಗಳು ಮೂರು ಅಂಕಗಳಿಗೆ ತಲುಪಿವೆ. ಆದಾಗ್ಯೂ, ದಕ್ಷಿಣ ಆಫ್ರಿಕಾವು ಅತ್ಯುತ್ತಮ ನಿವ್ವಳ ರನ್ ದರದಿಂದಾಗಿ ಅಂಕಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**